ರಾಜೀವ್ ಚಂದ್ರಶೇಖರ್
ಸಂಸತ್ ಸದಸ್ಯರು

2ನೇ ಫೆಬ್ರವರಿ, 2011

**ಮಾನ್ಯಶ್ರೀ ಯಡಿಯೂರಪ್ಪ ರವರೇ,**

ನಿಮಗೆ ತಿಳಿದಿರುವಂತೆ ನನ್ನ ವೈಯಕ್ತಿಕ ಪ್ರತಿಷ್ಠಾನ ಆಸರೆ ಯೋಜನೆಯಡಿ ಬಾಗಲಕೋಟೆ ಜಿಲ್ಲೆಯಲ್ಲಿ ಸಂತ್ರಸ್ತರಿಗೆ ಮನೆಗಳನ್ನು ನಿರ್ಮಿಸಲು ಬದ್ಧವಾಗಿತ್ತು. ಅದರಂತೆ ಬದಾಮಿ ತಾಲೂಕಿನ ಶಿರಬಡಗಿ ಗ್ರಾಮದಲ್ಲಿ ಪ್ರತಿಷ್ಠಾನ ನಿರ್ಮಿಸಿದ 293 ಮನೆಗಳು ಹಸ್ತಾಂತರಕ್ಕೆ ಸಿದ್ಧವಾಗಿವೆ.

ಮನೆಗಳು ಸಿದ್ಧವಾಗಿದ್ದರೂ ಅಗತ್ಯ ಎನಿಸಿರುವ ರಸ್ತೆ, ಚರಂಡಿ ಮತ್ತು ವಿದ್ಯುತ್ ಸಂಪರ್ಕ ಇತ್ಯಾದಿ ಅಗತ್ಯ ಮೂಲಸೌಕರ್ಯಗಳನ್ನು ಇನ್ನೂ ಕಲ್ಪಿಸಿಲ್ಲವಾದ್ದರಿಂದ ಅವುಗಳನ್ನು ಹಸ್ತಾಂತರಿಸಲು ನಮಗೆ ಸಾಧ್ಯವಾಗುತ್ತಿಲ್ಲ. ಈ ನಿಟ್ಟಿನಲ್ಲಿ ನಾವು ಸತತ ಸಂಪರ್ಕದಲ್ಲಿದ್ದರೂ, ಅನೇಕ ಬಾರಿ ಮನವಿ ಮಾಡಿಕೊಂಡಿದ್ದರೂ ಜಿಲ್ಲಾ ಆಡಳಿತ ಇದಕ್ಕೆ ಯಾವುದೇ ಪ್ರತಿಕ್ರಿಯೆ ನೀಡುತ್ತಿಲ್ಲ. ಹಾಗಾಗಿ ಈ ನಿಟ್ಟಿನಲ್ಲಿ ಯಾವುದೇ ಪ್ರಗತಿ ಸಾಧ್ಯವಾಗುತ್ತಿಲ್ಲ. ಇದರಿಂದಾಗಿ ನಾವು ಮನೆಗಳ ಹಸ್ತಾಂತರ ಕಾರ್ಯಕ್ರಮವನ್ನು ಎರಡು ಬಾರಿ ಮುಂದೂಡಬೇಕಾಯಿತು. ಇದಕ್ಕಾಗಿ ಎರಡು ಬಾರಿ ನಿಮ್ಮ ಕಚೇರಿಯಲ್ಲಿಯೇ ನಿಮ್ಮ ದಿನಾಂಕವನ್ನು ಬ್ಲಾಕ್ ಮಾಡಿದ್ದೇವೆ. ಇದಕ್ಕೆ ಕಾರಣ ಸ್ಥಳೀಯ ಅಧಿಕಾರಿಗಳ ನಿರ್ಲಕ್ಷ್ಯದ ಮನೋಭಾವ.

ನವೆಂಬರ್‌ನಲ್ಲಿ ಮನೆಗಳನ್ನು ಹಸ್ತಾಂತರಿಸುವ ಅಂತಿಮ ದಿನ ಈಗಾಗಲೇ ಕಳೆದುಹೋಗಿದೆ. ಬೇಸಿಗೆ ಆರಂಭಕ್ಕೆ ಇನ್ನು ಕೆಲವೇ ಸಮಯ ಇದೆ. ಮನೆಗಳನ್ನು ತಕ್ಷಣ ಹಸ್ತಾಂತರಿಸಿದರೆ ಸಂತ್ರಸ್ತರಿಗೆ ಅನುಕೂಲವಾಗುತ್ತದೆ. ದುರದೃಷ್ಟವಶಾತ್ ಪರಿಸ್ಥಿತಿಯ ಗಂಭೀರತೆಯನ್ನು ಸ್ಥಳೀಯ ಅಧಿಕಾರಿಗಳು ಅರ್ಥ ಮಾಡಿಕೊಂಡಂತಿಲ್ಲ. ಇದರಿಂದಾಗಿ ಮೂಲಸೌಕರ್ಯ ಕಲ್ಪಿಸಲು ಕೊನೆಯಿಲ್ಲದ ವಿಳಂಬ ನಡೆಯುತ್ತಿದೆ.

ಆಸರೆ ಯೋಜನೆಯ ಸಂಯೋಜಕನಾಗಿ ನಾನು ಈ ಆಮೆಗತಿಯ ಕೆಲಸದಿಂದ ನಿರಾಶನಾಗಿದ್ದೇನೆ. ಹಾಗಾಗಿ ಸೂಕ್ತ ಕ್ರಮ ಕೈಗೊಳ್ಳಲು ನಿಮ್ಮ ಗಮನಕ್ಕೆ ಇದನ್ನು ತರುತ್ತಿದ್ದೇನೆ. ಮನೆಗಳನ್ನು ಮುಂದಿನ ಮಾರ್ಚ್ ತಿಂಗಳೊಳಗೆ ಹಸ್ತಾಂತರಿಸಬೇಕಾಗಿದೆ. ಅಲ್ಲದೇ ಪಟ್ಟದಕಲ್ಲಿನಲ್ಲಿ ಭೂಮಿ ಒದಗಿಸುವ ಪ್ರಕ್ರಿಯೆಯೂ ಅಲ್ಲೇ ಸ್ಥಗಿತಗೊಂಡಿದೆ.

ತಮ್ಮ ವಿಶ್ವಾಸಿ

**ರಾಜೀವ್ ಚಂದ್ರಶೇಖರ್**

**ಶ್ರೀ ಬಿ ಎಸ್ ಯಡಿಯೂರಪ್ಪರವರು**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ, ಬೆಂಗಳೂರು

11ನೇ ಮಹಡಿ, ದೊಡ್ಡ ಗೋಪುರ, ಸರ್.ಎಂ.ವಿಶ್ವೇಶ್ವರಯ್ಯ ಕೇಂದ್ರ, ಡಾ.ಅಂಬೇಡ್ಕರ್ ವೀಧಿ, ಬೆಂಗಳೂರು - 560 001.
ದೂರವಾಣಿ : 91-80-22863600, ದೂರವಾಣಿ / ಫ್ಯಾಕ್ಸ್ : 91-80-22863680
ಅಂತರ್ಜಾಲ ವಿಳಾಸ : rajeev.c@nic.in
www.rajeev.in / ham: VU2RCL